ನಬಾರ್ಡ್‌ನಿಂದ ಪ್ರಸ್ತಾವನೆಗೆ ಅನುಮೋದನೆ ದೊರೆತ ನಂತರ ಕಾಮಗಾರಿ ಪ್ರಾರಂಭ ಮಾಡಲಾಗುವುದು.

ಈ) ಉದ್ಭವಿಸುವುದಿಲ್ಲ.

ಉ) ಪ್ರಥಮ ಹಂತದಲ್ಲಿ ಬೋಧಕ ಸಿಬ್ಬಂದಿಯನ್ನು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಿಂದ ಎರವಲು ಪಡೆಯಲಾಗಿದೆ. ಸದರಿ ಪಾಲಿಟೆಕ್ನಿಕ್‌ಗೆ ಮೊದಲನೇ ಹಾಗೂ ಎರಡನೇ ವರ್ಷಕ್ಕೆ ಮಂಜೂರಾಗಿರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ. ಅನುಕಂಪದ ಆಧಾರದ ಮೇಲೆ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ಬೆರಳಚ್ಚುಗಾರರು ಹಾಗೂ ಗ್ರೂಪ್ ಡಿ ಹುದ್ದೆಗಳನ್ನು ಭರ್ತಿ ಮಾಡಲು ವಿಭಾಗೀಯ ಅಧಿಕಾರಿಗಳಿಂದ ಪಟ್ಟಿ ಬಂದಿದ್ದು, ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ. ಇದಲ್ಲದೆ ಬೇರೆ ಇಲಾಖೆಗಳಲ್ಲಿ ಸಂಖ್ಯಾತೀರಿಕ್ತ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಗ್ರೂಪ್ ಸಿ ಮತ್ತು ಡಿ ವೃಂದದ ನೌಕರರುಗಳ ಪಟ್ಟಿ ಜಿಲ್ಲಾಧಿಕಾರಿಗಳಿಂದ ಬಂದಿದ್ದು ಅವರುಗಳಿಗೆ ನೇಮಕಾತಿ ನೀಡುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.

ಸುವರ್ಣ ಗ್ರಾಮ ಯೋಜನೆಯ ಮೂರು ಹಾಗೂ ನಾಲ್ಕನೇ ಹಂತದ ಕಾಮಗಾರಿ

516 (214) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುವರ್ಣ ಗ್ರಾಮ ಯೋಜನೆಯ ಮೂರು ಹಾಗೂ ನಾಲ್ಕನೇ ಹಂತದ ಕಾಮಗಾರಿಗಳು ಯಾವಾಗ ಪ್ರಾರಂಭ ಮಾಡಲಾಗುವುದು: ಈ ಯೋಜನೆಗಾಗಿ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) :

ಅ) ಸುವರ್ಣ ಗ್ರಾಮ ಯೋಜನೆಯ 3ನೇ ಹಂತವು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿಯಲ್ಲಿರುತ್ತದೆ. ಕೆಲವು ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು

ಪ್ರಾರಂಭಿಸಲಾಗಿದೆ. ಇನ್ನುಳಿದ ಜಿಲ್ಲೆಗಳಲ್ಲಿ ಗ್ರಾಮಾಭಿವೃದ್ಧಿ ಯೋಜನೆ ತಯಾರಿಸಲಾಗಿದೆ ಮತ್ತು ಆಡಳಿತಾತ್ಮಕ ಮಂಜೂರಾತಿ ನೀಡಲಾಗುತ್ತಿದ್ದು, ಕಾಮಗಾರಿಗಳನ್ನು ಪ್ರಾರಂಭಿಸಲಾಗುತ್ತಿದೆ.

ಸುವರ್ಣ ಗ್ರಾಮ ಯೋಜನೆಯ 4ನೇ ಹಂತವು ಗುಲ್ಬರ್ಗಾ ಕಂದಾಯ ವಿಭಾಗದ 6 ಜಿಲ್ಲೆಗಳಲ್ಲಿ ಜಾರಿಯಲ್ಲಿದೆ. 5 ಜಿಲ್ಲೆಗಳಲ್ಲಿ ಗ್ರಾಮಗಳ ಆಯ್ಕೆ ಮಾಡಲಾಗಿದೆ ಮತ್ತು ರಾಯಚೂರು ಜಿಲ್ಲೆಯ ಗ್ರಾಮಗಳ ಆಯ್ಕೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಆಯ್ಕೆಯಾದ ಗ್ರಾಮಗಳ ಗ್ರಾಮಾಭಿವೃದ್ಧಿ ಯೋಜನೆ ತಯಾರಿಸುವ ಪ್ರಕ್ರಿಯೆ ಜಾರಿಯಲ್ಲಿದೆ.

ಈ ಯೋಜನೆಯ ಅನುಷ್ಠಾನಕ್ಕಾಗಿ ಇಲ್ಲಿಯವರೆಗೆ ರೂ.1189.26 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ.

ಬೀದರ್ ತಾಲ್ಲೂಕಿನಲ್ಲಿ ಶಾಲಾ ಪಠ್ಯಪುಸ್ತಕಗಳ ಕೊರತೆ

518 (681) ಶ್ರೀ ರಹೀಂ ಖಾನ್ (ಬೀದರ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರವು 2011–12ನೇ ಸಾಲಿನಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಪದವಿ ಪೂರ್ವ ಶಿಕ್ಷಣ ವ್ಯಾಸಂಗ ಮಾಡುವ ವಿದ್ಯಾರ್ಥಿ ವಿದ್ಯಾರ್ಥಿನಿಯರುಗಳಿಗೆ ಯಾವುದೇ ರೀತಿಯ ಪಠ್ಯ ಪುಸ್ತಕಗಳ ಕೊರತೆ ಇಲ್ಲದಂತೆ ನೋಡಿಕೊಳ್ಳಲು ಇಲಾಖಾ ವತಿಯಿಂದ ಕೈಗೊಂಡಿರುವ ಕ್ರಮವೇನು;

ಆ) ಬೀದರ್ ತಾಲ್ಲೂಕಿನಲ್ಲಿ 2010–11ನೇ ಸಾಲಿನಲ್ಲಿ ವ್ಯಾಸಂಗ ಮಾಡುವ ಪ್ರಾಥಮಿಕ ಪ್ರೌಢ, ಪದವಿ ಪೂರ್ವ ಶಿಕ್ಷಣದ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಇಲ್ಲದೇ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ನಿಜವೇ;

ಇ) ಸರ್ಕಾರವು ಇಂತಹ ಸಮಸ್ಯೆಯು ಮರುಕಳುಹಿಸದಂತೆ ಕೈಗೊಂಡಿರುವ ಕ್ರಮಗಳೇನು;

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 2011–12ನೇ ಸಾಲಿನಲ್ಲಿ ಪಠ್ಯಪುಸ್ತಕಗಳ ಕೊರತೆ ಆಗದಂತೆ ಮಾಡುವ ಉದ್ದೇಶದಿಂದ ವಾಸ್ತವಿಕ ಮಕ್ಕಳ ಸಂಖ್ಯೆಗಿಂತ ಶೇಕಡ 10 ರಷ್ಟು ಹೆಚ್ಚಿಗೆ ಪಠ್ಯಪುಸ್ತಕಗಳನ್ನು ಮುದ್ರಿಸಲು ಈಗಾಗಲೇ ಮುದ್ರಣ ಆದೇಶವನ್ನು